# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು–572 103

ಸಂಖ್ಯೆ: ತುವಿ:ಅವಿ:ವಿ.ಕ್ಷೇ:2024–25 | 2666 ದಿನಾಂಕ:17.12.2024

## "ಸುತ್ತೋಲೆ"

ವಿಷಯ:ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳಲ್ಲಿ ಅಧ್ಯಯನ ಮಾಡುತ್ತಿರುವ ಹಿಂದುಳಿದ ವರ್ಗಗಳ ಮಹಿಳಾ ವಿದ್ಯಾರ್ಥಿಗಳಿಗೆ ಬಿಸಿಎಂ ಪಾವತಿ ಮಹಿಳಾ ಹಾಸ್ಟೆಲ್(BCM PAYING WOMEN'S HOSTEL)ಗೆ ಪ್ರವೇಶಾತಿ ನೀಡುತ್ತಿರುವ ಕುರಿತು.

ಉಲ್ಲೇಖ:ಈ ಕಚೇರಿ ಸುತ್ತೋಲೆ ಸಂಖ್ಯೆ:ಅವಿ:ವಿ.ಕ್ಷೇ:2024–25/2529 ದಿನಾಂಕ:03.12.2024

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ನಗರದ ರೈಲ್ವೆ ಸ್ಟೇಷನ್ ರಸ್ತೆಯಲ್ಲಿರುವ ತುಮಕೂರು ವಿಶ್ವವಿದ್ಯಾನಿಲಯದ ಬಿಸಿಎಂ ಮಹಿಳಾ ಪಾವತಿ ಹಾಸ್ಟೆಲ್(BCM PAYING WOMEN'S HOSTEL) ಪ್ರಾರಂಭವಾಗುತ್ತಿದ್ದು, ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳಲ್ಲಿ ಅಧ್ಯಯನ ಮಾಡುತ್ತಿರುವ ಹಿಂದುಳಿದ ವರ್ಗಗಳ ಮಹಿಳಾ ವಿದ್ಯಾರ್ಥಿಗಳಿಗೆ ಪ್ರವೇಶ ಪಡೆಯಲು ಅವಕಾಶ ನೀಡಲಾಗುತ್ತಿದೆ.

ಸದರಿ ಇಚ್ಚೆಯಿರುವ ಮಹಿಳಾ ವಿದ್ಯಾರ್ಥಿಗಳ ವಿವರ ಪಡೆದು, ಸದರಿ ವಿದ್ಯಾರ್ಥಿಗಳ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ದಿನಾಂಕ:10.12.2024ರೊಳಗಾಗಿ ಸಲ್ಲಿಸುವಂತೆ ಉಲ್ಲೇಖಿತ ದಿನಾಂಕ:03.12.2024ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು,

ಹಾಸ್ಟೆಲ್‌ಗೆ ಪ್ರವೇಶ ಪಡೆಯಲು ಇಚ್ಚೆಯಿರುವ ಮಹಿಳಾ ವಿದ್ಯಾರ್ಥಿಗಳ ಹೆಸರುಗಳ ಪಟ್ಟಿಯನ್ನು ದಿನಾಂಕ:24.12.2024ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಮತ್ತೊಮ್ಮೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

ಉಪಕುಲಸಚಿವರು

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಅಧ್ಯಕ್ಷರು/ಸಂಯೋಜಕರು, ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ಹಾಗೂ ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ನಿರ್ದೇಶಕರು, ಹಿಂದುಳಿದ ವರ್ಗಗಳ ಕೋಶ. ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು–ಸದರಿ ಸುತ್ತೋಲೆಯನ್ನು ಸಂಬಂಧಿಸಿದವರಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು ಮತ್ತು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
3. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.

NHD24